**ಸಾಕ್ಷಿಯನ್ನು ದಿನಾಂಕ: 12-01-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು :- ವಾದಿ ಪರ ವಕೀಲರಿಂದಃ**

ನಾನು ವ್ಯವಸಾಯ ಮಾಡುತ್ತೇನೆ. ನಾನು ಪಿ.ಯು.ಸಿ. ಓದಿರುತ್ತೇನೆ. 2 ರಿಂದ 4 ನೇ ಪ್ರತಿವಾದಿಗಳ ಜಮೀನು ನಮ್ಮ ಜಮೀನಿನ ಪಕ್ಕದಲ್ಲಿ ಇದೆ. 2 ನೇ ಪ್ರತಿವಾದಿಯ ಪರಿಚಯ ನನಗೆ ಮೊದಲಿನಿಂದಲೂ ಇರುತ್ತದೆ. ನಮ್ಮ ಊರಿನಿಂದ ಕುರುಬರಹಳ್ಳಿ 1 ಕಿ.ಮೀ ಇದೆ. ವಾದಿಯ ಮದುವೆ ಯಾವಾಗ ಆಗಿರುತ್ತದೆ ಎಂದರೆ ನನಗೆ ದಿನಾಂಕ ಗೊತ್ತಿಲ್ಲ. ವಾದಿಗೆ ಎಷ್ಟು ಜನ ಮಕ್ಕಳಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳು ವಿಭಾಗ ಆಗಿರುವ ಬಗ್ಗೆ ನನಗೆ ಗೊತ್ತಿಲ್ಲ. ವಾದಿಗಳಿಗೆ ಮತ್ತು ಪ್ರತಿವಾದಿಗಳಿಗೆ ದಾವಾ ಸ್ವತ್ತುಗಳ ಕುರಿತು ರಾಜೀಯಾಗಿರುತ್ತದೆ ಎಂದು ನಾನು ಹೇಳಿರುತ್ತೇನೆ ಎಂದರೆ ಸರಿ. ವಾದಿಯ ವಿವಾಹವಾದಾಗ ನನಗೆ ಸುಮಾರು 30 ವರ್ಷ ವಯಸ್ಸು. ಪ್ರತಿವಾದಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿ ಮತ್ತು ಪ್ರತಿವಾದಿಗಳಿಗೆ ಯಾವುದೇ ರಾಜೀಯಾಗಿರುವುದಿಲ್ಲ ಹಾಗೂ ಯಾವುದೇ ವಿಭಾಗ ಆಗಿರುವುದಿಲ್ಲ ನಾನು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ವಿವಾಹವಾದಾಗ ನಾನು ಅಪ್ರಾಪ್ತ ವಯಸ್ಕನಾಗಿದ್ದೆ ಹಾಗೂ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಈ ದಾವೆಯನ್ನು ಜಮೀನಿನ ವಿಭಾಗವಾಗಬೇಕು ಎಂದು ದಾಖಲಿಸಿರುತ್ತಾರೆ. ನನಗೆ ದಾವಾ ಸ್ವತ್ತುಗಳ ಬಗ್ಗೆ ಸರ್ವೆ ನಂ.102/4 ರ ಬಗ್ಗೆ ಮಾತ್ರ ಮಾಹಿತಿ ಇದೆ, ಉಳಿಕೆ ದಾವಾ ಸ್ವತ್ತುಗಳ ಬಗ್ಗೆ ನನಗೆ ಗೊತ್ತಿಲ್ಲ. ನನಗೆ ದಾವಾ ಸ್ವತ್ತುಗಳ ಬಗ್ಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ಪ್ರೇರೆಪಿಸಿ ನನ್ನನ್ನು ಸಾಕ್ಷಿ ನುಡಿಯಲು ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿಯಲ್ಲ. ಈ ದಾವೆ ಚಾಲ್ತಿಯಲ್ಲಿದೆ ಎಂದು ನನಗೆ ಪ್ರತಿವಾದಿಗಳ ವಕೀಲರು ಮಾಹಿತಿ ನೀಡಿರುತ್ತಾರೆ. ದಾವೆಯಲ್ಲಿ ಎಲ್ಲಾ ವಿಚಾರಗಳು ಇಂಗ್ಲೀಷ ಭಾಷೆಯಲ್ಲಿದ್ದು, ನನಗೆ ಆ ಬಗ್ಗೆ ಏನೂ ಗೊತ್ತಿಲ್ಲ ಎಂದರೆ ನಮ್ಮ ವಕೀಲರು ತಿಳಿಸಿರುತ್ತಾರೆ. ನಾನು ಪ್ರತಿವಾದಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿರುತ್ತಾರೆ,**

**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ದೇವನಹಳ್ಳಿ.**